**ಪಿ.ಡಬ್ಲ್ಯೂ-1**

**ದಿನಾಂಕಃ 21-11-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.**

**ಪಾಟೀ ಸವಾಲುಃ** 2 ನೇ ಎದುರುದಾರರ ಪರ ಶ್ರೀ ಪಿ. ಹೆಚ್. ಪಿ. ವಕೀಲರಿಂದಃ

ಅಪಘಾತವು ಶಿಕಾರಿಪುರ ತಾಲೂಕಿನ ಚಿಕ್ಕಮಾಗಡಿ ಗ್ರಾಮದ ವ್ಯಾಪ್ತಿಯಲ್ಲಿ ಆಗಿರುತ್ತದೆ. ನಾನು ಸೊರಬಾ ತಾಲೂಕಿನ ಗಿಣಿವಾಲ ಬಾರಂಗಿ ಗ್ರಾಮದ ನಿವಾಸಿ. ಪ್ರಸ್ತುತ ನಾನು ಚಿಕ್ಕೇರೂರಿನಲ್ಲಿ ವಾಸವಾಗಿರುತ್ತೇನೆ. ನಾನು ಚಿಕ್ಕೇರೂರು ಗ್ರಾಮದಲ್ಲಿ ವಾಸವಾಗಿರುವ ಬಗ್ಗೆ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸರಿ. ಅಪಘಾತ ಕಾಲಕ್ಕೆ ದ್ವಿ ಚಕ್ರ ವಾಹನವನ್ನು ನಾನು ಚಲಾಯಿಸುತ್ತಿದ್ದೆ. ಅಪಘಾತವು ಕರೆ ಏರಿಯ ಮೇಲೆ ಆಗಿರುತ್ತದೆ ಎಂದರೆ ಆಗಿರುತ್ತದೆ. ನಾನು ಅತೀ ವೇಗವಾಗಿ ವಾಹನವನ್ನು ಚಲಾಯಿಸಿದ ಪರಿಣಾಮ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ನನಗೆ ಎಡಗೈ ಮೂಳೆ ಮುರಿತ ಆಗಿರುತ್ತದೆ. ಚಿಕ್ಕೇರೂರು ಖಾಸಗಿ ಆಸ್ಪತ್ರೆ, ಶಿಕಾರಿಪುರ ಹಾಗೂ ಶಿವಮೊಗ್ಗದ ಮೆಗ್ಗಾನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಶಿಕಾರಿಪುರ ಆಸ್ಪತ್ರೆಯಲ್ಲಿ ಎಕ್ಸರೆ ಮಾಡಿಸಿರುವುದಿಲ್ಲ. ನನಗೆ ಯಾವುದೇ ಮೂಳೆ ಮುರಿತ ಆಗದ ಕಾರಣ ಎಕ್ಸರೆ ಮಾಡಿಸಿರುವುದಿಲ್ಲ. 2 ದಿನಗಳ ಕಾಲ ಒಳರೋಗಿಯಾಗಿ ಶಿವಮೊಗ್ಗದ ಮೆಗ್ಗಾನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ನನಗೆ ಶಸ್ತ್ರ ಚಿಕಿತ್ಸೆ ಆಗಿರುವುದಿಲ್ಲ. ಸೊಂಟದ ಒಳ ಗಾಯಕ್ಕೆ ಪಟ್ಟಿ ಕಟ್ಟಿದ್ದರು. ನನಗೆ ಸಾದಾ ಸ್ವರೂಪದ ಗಾಯಗಳು ಆಗಿರುತ್ತವೆ ಎಂದರೆ ಸರಿಯಲ್ಲ. ಆದ್ದರಿಂದ ಎರಡೇ ದಿನಗಳಲ್ಲಿ ಗುಣಮುಖನಾಗಿರುತ್ತೇನೆ ಎಂದರೆ ಸರಿಯಲ್ಲ.

2. ದಾವಣಗೆರೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಎಸ್. ಎಸ್. ಆಸ್ಪತ್ರೆಯಲ್ಲಿ 9 ದಿನ ಹೊರ ರೋಗಿಯಾಗಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ಯಾವುದೇ ಚಿಕಿತ್ಸೆ ಪಡೆದುಕೊಳ್ಳದಿದ್ದರು, ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-11 ನ್ನು ನಿಪಿ-9 ದಾಖಲೆಯನ್ನು ಪಡೆದುಕೊಳ್ಳುವ ಸಲುವಾಗಿ ಮಾಡಿಸಲಾಗಿದೆ ಎಂದರೆ ಸರಿಯಲ್ಲ.

3. ನಾನು ಮೋಟಾರ ರಿಪೇರಿ ಕೆಲಸ ಮಾಡುತ್ತೇನೆ. ಸದರಿ ಕೆಲಸದಿಂದ ಪ್ರತಿ ತಿಂಗಳು ರೂ.35,000/-ಗಳ ಆದಾಯ ಹೊಂದಿರುವ ಬಗ್ಗೆ ದಾಖಲೆಗಳನ್ನು ಹಾಜರು ಪಡಿಸಲಾಗಿದೆಯೇ ಎಂದರೆ ಇಲ್ಲ. ನನಗೆ ಯಾವುದೇ ಗಾಯಗಳು ಆಗದಿದ್ದರು ನಿಪಿ-8 ರಿಂದ 11ರ ದಾಖಲೆಗಳನ್ನು ಸೃಷ್ಟಿಸಿ ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಅಂಗನ್ಯೂನ್ಯತೆ ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಎಂದಿನಂತೆ ಕೆಲಸ ಮಾಡಲು ಶಕ್ತನು ಎಂದರೆ ಸರಿಯಲ್ಲ. ಚಿಕಿತ್ಸೆಗಾಗಿ

ರೂ.2,00,000/- ಗಳನ್ನು ಖರ್ಚು ಮಾಡಿದ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಅಪಘಾತವು ನನ್ನ ತಪ್ಪಿನಿಂದಲೇ ಆಗಿದೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ.

ದಿನಾಂಕಃ 21-11-2025.

Sd/-

ಹಿರಿಯ ಸಿ ಜೆ ಮತ್ತು ಜೆ. ಎಂ.ಎಫ್. ಸಿ

ಹಿರೇಕೆರೂರು